# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

## ಟಿ. ನರಸೀಪುರ.

## ಸಿ. ಸಿ ನಂ. 649/2023

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿ : ನವೀನ ಬಿನ್.ಬಸವರಾಜು, 28 ವರ್ಷ,
ವಾಸ ಬೋಳೇಗೌಡನಹುಂಡಿ ಗ್ರಾಮ,
ಸೋಸಲೆ ಹೋಬಳಿ,
ಟಿ,ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 02.09.2023 ರಂದು ಮಧ್ಯಾಹ್ನ 1.00 ಗಂಟೆ ಸಮಯದಲ್ಲಿ ತಿ.ನರಸೀಪುರ ತಾಲ್ಲೂಕು ಬನ್ನೂರು ಪೊಲೀಸ್ ಠಾಣೆ ಸರಹದ್ದು ಬೋಳೇಗೌಡನ ಹುಂಡಿ ಗ್ರಾಮದ ನೀರಿನ ಟ್ಯಾಂಕ್ ಹತ್ತಿರ, ಕಲ್ಕುಣಿ – ರಾಮೇಗೌಡನಪುರಕ್ಕೆ ಹೋಗುವ ರಸ್ತೆಯಲ್ಲಿ ಚಾಸಾ–1 ರಾಮ್ ರವರು ಜಮೀನು ಕೆಲಸ ಮುಗಿಕೊಂಡು ಮನೆಗೆ ನಡೆದುಕೊಂಡು ಹೋಗುತ್ತಿದ್ದಾಗ ದಾರಿಯಲ್ಲಿ ಸಿಕ್ಕ ಚಾಸಾ–2 ರೇವಣ್ಣರವರ ಜೊತೆ ಚಾಸಾ–1 ರಾಮ್ ರವರು ತಮ್ಮ ಜಮೀನಿನ ಗ್ರೀನ್ ಬೇಲಿಯನ್ನು ಯಾರೋ ಕುಯ್ದು ಹಾಕಿದ್ದ ವಿಚಾರವನ್ನು ಒಪ್ಪಿಸುತ್ತಿದ್ದಾಗ ಆರೋಪಿಯಾದ ನೀವು ಚಾಸಾ–1 ರಾಮ್ ರವರ ಜೊತೆ ಏಕಾಏಕಿ ಏನು ನೀನು ಒಪ್ಪಿಸುವುದು ನಾನೇ ಗ್ರೀನ್ ಬೇಲಿಯನ್ನು ಕುಯ್ದು ಹಾಕಿರುವುದು ಏನು ಮಾಡುತ್ತೀಯಾ ಎಂದು ತೀಟೆ ಜಗಳ ತೆಗೆದು ಕಬ್ಬಿಣದ ರಾಡಿನಿಂದ ಸ್ವ–ಇಚ್ಚೆಯಿಂದ ಚಾಸಾ–1 ರಾಮ್ ರವರ ಬಲ ಪಕ್ಕೆಗೆ, ಬಲ ಮಂಡಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.324 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, ಆರೋಪಿಯಾದ ನೀವು ಚಾಸಾ-1 ರಾಮ್ ರವರನ್ನು ಉದ್ದೇಶಿಸಿ ನಿನ್ನನ್ನು ಮತ್ತು ನಿನ್ನ ಮಕ್ಕಳನ್ನು ಕೊಲೆ ಮಾಡುತ್ತೇನೆಂದು ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.506 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ 03.11.2025.

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## **ಆರೋಪಿತರ ಹೇಳಿಕೆ**

ಪ್ರಶ್ನೆ- 1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**ಆರೋಪಿ ಸಹಿ**